# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಿಜಾಪುರ ಜಿಲ್ಲೆ ವ್ಯಾಪ್ತಿಯ ಪ್ರವಾಹ ಪೀಡಿತ ಗ್ರಾಮಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಿಜಾಪುರ ರವರ ಪ್ರಸ್ತಾವನೆ ಸಂಖ್ಯೆ: ಜಿಪಂಅ/ಪುನರ್ವಸತಿ/ಸಿಆರ್-60/2009-10, ದಿನಾಂಕ:02.03.2013.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/108/ಗ್ರಾನೀಸ(4)09, ದಿನಾಂಕ:16.09.2010.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/108/ಗ್ರಾನೀಸ(4)09, ದಿನಾಂಕ:24.04.2010.

---

**ಪೀಠಿಕೆ:**

ಮೇಲೆ ಓದಲಾದ (2) ಮತ್ತು (3)ರ ಆದೇಶಗಳಲ್ಲಿ ಬಿಜಾಪುರ ಜಿಲ್ಲೆ ವ್ಯಾಪ್ತಿಯ ಪ್ರವಾಹ ಪೀಡಿತ ಗ್ರಾಮಗಳಲ್ಲಿ ಸಮಸ್ಯೆಗೊಳಗಾದ ಗ್ರಾಮೀಣ ಜನವಸತಿಗಳಿಗೆ ಕುಡಿಯುವ ನೀರಿನ ಸುವ್ಯವಸ್ಥೆ ಕಲ್ಪಿಸುವ ಸಂಬಂಧ ಇಲ್ಲಿಯವರೆಗೆ **ರೂ.459.09ಲಕ್ಷ**ಗಳ ಅನುದಾನವನ್ನು ಬಿಜಾಪುರ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲಾಗಿದೆ. ಸಮಸ್ಯಾತ್ಮಕ ಪ್ರವಾಹ ಪೀಡಿತ ಗ್ರಾಮಗಳಲ್ಲಿ ಶಾಶ್ವತ ಪರಿಹಾರ ಸಂಬಂಧ, ತುರ್ತು ಕುಡಿಯುವ ನೀರಿನ ಯೋಜನೆಗಳನ್ನು ಪೂರ್ಣಗೊಳಿಸಲು ಈಗಾಗಲೇ ಜಿಲ್ಲಾಧಿಕಾರಿಗಳ ಸಮನ್ವಯದಲ್ಲಿ ಜಿಲ್ಲಾ ಪಂಚಾಯತ್ ಅನುಮೋದಿಸಿರುವ ಕ್ರಿಯಾ ಯೋಜನೆ ಆಧರಿಸಿ, ಬಿಜಾಪುರ ಜಿಲ್ಲೆಗೆ **ರೂ.105.00ಲಕ್ಷ** ಅನುದಾನವನ್ನು ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 108 ಗ್ರಾನೀಸ(4) 2009 ಬೆಂಗಳೂರು, ದಿನಾಂಕ:30.03.2013

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ಬಿಜಾಪುರ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಪ್ರವಾಹದಿಂದ ಹಾನಿಗೊಳಗಾದ ಗ್ರಾಮೀಣ ಪ್ರದೇಶಗಳ ಪೈಕಿ ಸ್ಥಳಾಂತರಗೊಂಡ ಜನವಸತಿಗಳಿಗೆ, ಸಮರ್ಪಕ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆಗಳ ಅನುಷ್ಠಾನ ಸಂಬಂಧದ ಕಾಮಗಾರಿಗಳನ್ನು ಪೂರ್ಣಗೊಳಿಸುವ ಸಲುವಾಗಿ **ರೂ.105.00ಲಕ್ಷ (ಒಂದು ನೂರ ಐದು ಲಕ್ಷ ರೂಪಾಯಿಗಳು ಮಾತ್ರ)**ಗಳ ಹೆಚ್ಚುವರಿ ಅನುದಾನವನ್ನು ಬಿಜಾಪುರ ಜಿಲ್ಲಾ ಪಂಚಾಯತ್‌ಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಅನುಷ್ಠಾನಗೊಳಿಸುವ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಮಾಹಿತಿಗಾಗಿ ಕಳುಹಿಸುವುದು. ಜಿಲ್ಲಾ ಪಂಚಾಯತ್ ಇತರೆ ಯಾವುದೇ ಕಾರಣಕ್ಕೂ ಈ ಆದೇಶದಲ್ಲಿ ನಿರ್ವಹಿಸಲಾದ ಕಾಮಗಾರಿಗಳು ಇತರೆ ಗ್ರಾಮೀಣ ನೀರು ಸರಬರಾಜು ಯೋಜನೆಗಳಡಿ ಪುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು. ಹಾಗೂ ಅಗತ್ಯವಿರುವ ಯೋಜನೆಗಳನ್ನು ಮಾತ್ರ ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

3. ಈ ಅನುದಾನವನ್ನು ರಾಜ್ಯವಲಯದ **ಲೆಕ್ಕ ಶೀರ್ಷಿಕೆ:4215-01-102-9-01-059**ರಡಿ ಗಣನೆಗೆ ತೆಗೆದುಕೊಂಡು, **RTGS** ಮುಖೇನ ಈಗಾಗಲೇ **Coverage & Quality**ಯಡಿ ಗೊತ್ತುಪಡಿಸಿರುವ **SWSM** ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು. ಸಿಂಡಿಕೇಟ್ ಬ್ಯಾಂಕ್ ಮೂಲ **ಖಾತೆ ಸಂಖ್ಯೆ:04462010091577**ರಿಂದ **Coverage & Quality** ಕಾರ್ಯಕ್ರಮದ **ಖಾತೆ ಸಂಖ್ಯೆ:04462010094572**ಕ್ಕೆ **ರೂ.105.00ಲಕ್ಷ**ಗಳನ್ನು ವರ್ಗಾಯಿಸಿ, ಸದರಿ ಅನುದಾನದಿಂದ **C&Q** ಘಟಕದಡಿ ಬಿಜಾಪುರ ಜಿಲ್ಲಾ ಪಂಚಾಯತ್ ಕಳುಹಿಸುವ ಬಿಲ್‌ಗಳನ್ನು ಮಾನ್ಯ ಮಾಡತಕ್ಕದ್ದು, ಸದರಿ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು **CE/PRED** ಬೆಂಗಳೂರು ಹಾಗೂ ಬಿಜಾಪುರ ಜಿಲ್ಲಾ ಪಂಚಾಯತ್ **IMIS**ನಡಿ ದಾಖಲಿಸತಕ್ಕದ್ದು.

4. **ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ/117/ಗ್ರಾನೀಸ(4)2011, ದಿನಾಂಕ:15.10.2011**ರನ್ವಯ ಸಂಬಂಧಪಟ್ಟ ಅಧೀಕ್ಷಕ ಅಭಿಯಂತರರು, **PRED** ವೃತ್ತ ಕಛೇರಿ ಇವರು ಪ್ರಶ್ನಿತ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪರಿವೀಕ್ಷಣೆ ಮಾಡಿ, ಸರ್ಕಾರಕ್ಕೆ ವಾಸ್ತವಿಕ ಚಿತ್ರಣ ನೀಡತಕ್ಕದ್ದು.

5. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು, ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ **ಆದೇಶ ಸಂಖ್ಯೆ: ಗ್ರಾಅಪ/13/ಆಂಆಸ/2012, ದಿ:02.04.2012**ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಉಪ ಮುಖ್ಯಮಂತ್ರಿಗಳು ರವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು-1.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು-1.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾಮಂಡಳಿ, ಸಂಕೀರ್ಣ ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ಓಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
12. ಅಧೀಕ್ಷಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿ, ಧಾರವಾಡ.
13. ಜಿಲ್ಲಾಧಿಕಾರಿಗಳು, ಬಿಜಾಪುರ.
14. ಜಿಲ್ಲಾ ಪಂಚಾಯತ್ ಅಧ್ಯಕ್ಷರು ಬಿಜಾಪುರ.
15. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು, ಬಿಜಾಪುರ.
16. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಬಿಜಾಪುರ.
17. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್, ಬಿಜಾಪುರ.
18. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಶೇಷಾದ್ರಿಪುರಂ, ಬೆಂಗಳೂರು-20.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು, KRWSSA ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು / ಅಪರ ನಿರ್ದೇಶಕರು, ಆರ್ಥಿಕ – KRWSSA , RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
21. **ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-9.**
22. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಜಿಡಿ ಪ್ರತಿ ಶಾಖೆ).
26. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.